**ಸಾಕ್ಷಿಗೆ ದಿನಾಂಕಃ 26.09.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.AKM ರವರಿಂದಃ**

1) ನಾನು ಈ ಪ್ರಕರಣದಲ್ಲಿ **2** ನೇ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು** **ನಿ.ಪಿ.2** ಎಂದು, **ಸ್ಥಳ ಪಂಚನಾಮೆಯನ್ನು** ನಿ.ಪಿ.**3** ಎಂದು, **ಕಚ್ಚಾ ನಕ್ಷೆಯನ್ನು** ನಿ.ಪಿ.**4** ಎಂದು, ಐಎಂವಿ ವರದಿಯನ್ನು ನಿ.ಪಿ.**5** ಎಂದು, ಶವ ಪಂಚನಾಮೆಯನ್ನು ನಿ.ಪಿ.**6** ಎಂದು, ಶವ ಪರೀಕ್ಷಾ ವರದಿಯನ್ನು ನಿ.ಪಿ.**7** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**8** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.1 ರಿಂದ ನಿ.ಪಿ.8 ಎಂದು ಗುರುತು ಆಗಿರುವ ದಾಖಲೆಗಳು ಮೈಸೂರು ಗ್ರಾಮಾಂತರ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

3) ಅಪಘಾತದಲ್ಲಿ ಮರಣ ಹೊಂದಿರುವ ಭಾನುಪ್ರಕಾಶ ರವರು ಐಟಿಐಗೆ ಸೇರಿಕೊಂಡಿದ್ದರು ಎಂಬ ಬಗ್ಗೆ ಇರುವ ದಾಖಲೆಯನ್ನು ನಿ.ಪಿ.**9** ಎಂದು, ಮತ್ತು ಪ್ರವೇಶ ಶುಲ್ಕ ಕಟ್ಟಿರುವ ಬಗ್ಗೆ ಇರುವ ದಾಖಲೆಯನ್ನು ನಿ.ಪಿ.**10** ಎಂದು ಗುರುತಿಸಿದೆ.

4) ಒಟ್ಟು **10** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**11** ಎಂದು ಗುರುತಿಸಿದೆ.

5) ಈಗ ಸಾಕ್ಷಿದಾರರು ತಮ್ಮ ಹಾಗೂ ಇತರೆ ಅರ್ಜಿದಾರರ ಮೂಲ ಆಧಾರ್ ಕಾರ್ಡ್ ದಾಖಲೆಗಳು ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು ನಿ.ಪಿ.**12** ರಿಂದ ನಿ.ಪಿ.**14** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

6) ಆದ ಕಾರಣದಿಂದ ಪ್ರಾರ್ಥನೆಯಂತೆ ನಮಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**<u>ಪಾಟೀ ಸವಾಲು: 1 ಮತ್ತು 2 ನೇ ಎದುರುದಾರರ ಪರ ವಕೀಲರಿಂದಃ</u>**

ಸದರಿ ಎದುರುದಾರರು ಮತ್ತು ಅವರ ಪರ ವಕೀಲರು ಹಾಜರಿಲ್ಲ ಮತ್ತು ಯಾವುದೇ ಲಿಖಿತ ಹೇಳಿಕೆ ಸಲ್ಲಿಸಿಲ್ಲ. ಆದ ಕಾರಣದಿಂದ ಯಾವುದೇ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರು ವಿಚಾರಣೆಃ ಇಲ್ಲ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.